# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 936 |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14-03-2025 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿ ಕೃಷಿ ಉತ್ಪನ್ನಗಳನ್ನು ಹಾಗೂ ಆಹಾರ ಸಂಸ್ಕರಣಾ ಉದ್ಯಮಗಳಾದ ಹಣ್ಣು ಮತ್ತು ತರಕಾರಿ ಸಂಸ್ಕರಣೆ, ಡೈರಿ ಉತ್ಪನ್ನಗಳು ಮತ್ತು ಧಾನ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕರ್ನಾಟಕ ಸರ್ಕಾರದ ಕೃಷಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (PMFME) ಯೋಜನೆಯಡಿಯಲ್ಲಿ ರಾಯಚೂರು ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕೃಷಿ ಉತ್ಪನಗಳನ್ನು ಹಾಗೂ ಆಹಾರ ಸಂಸ್ಕರಣಾ ಉದ್ಯಮಗಳಾದ ಹಣ್ಣು ಮತ್ತು ತರಕಾರಿ ಸಂಸ್ಕರಣೆ, ಡೈರಿ ಉತ್ಪನ್ನಗಳು ಮತ್ತು ಧಾನ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಅವಕಾಶವಿರುತ್ತದೆ. ಯೋಜನೆಯಡಿಯಲ್ಲಿ ಸಾಲ ಸಂಪರ್ಕಿತ ಶೇಕಡ 35% ರಷ್ಟು ಸಹಾಯಧನವನ್ನು ನೀಡಲಾಗುತ್ತಿದ್ದು, ರಾಜ್ಯ ಸರ್ಕಾರದ ವತಿಯಿಂದ ಶೇಕಡ 15% ರಷ್ಟು ಹೆಚ್ಚುವರಿ ಸಹಾಯಧನವನ್ನು ನೀಡಲಾಗುತ್ತಿದೆ (ಗರಿಷ್ಠ ಸಹಾಯಧನ ರೂ.15 ಲಕ್ಷ). ಯೋಜನೆಯ ಅನುಷ್ಠಾನದಲ್ಲಿ ರಾಜ್ಯ ನೋಡಲ್ ಏಜನ್ಸಿಯಾಗಿ ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ವು ಕರ್ತವ್ಯ ನಿರ್ವಹಿಸುತ್ತಿದೆ. ಆದ್ದರಿಂದ, ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಆ) | ರಾಯಚೂರಿನಲ್ಲಿ ಕೃಷಿ ಆಧಾರಿತ ಕೈಗಾರಿಕೆಗಳು ಕೀಟನಾಶಕಗಳು ಮತ್ತು ಬೀಜಗಳಂತಹ ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರಕ್ಕೆ ಇದೆಯೇ; | ರಾಯಚೂರಿನಲ್ಲಿ ಕೃಷಿ ಆಧಾರಿತ ಕೈಗಾರಿಕೆಗಳು ಕೀಟನಾಶಕಗಳು ಮತ್ತು ಬೀಜಗಳಂತಹ ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಇ) | ರಾಯಚೂರು ಜಿಲ್ಲೆಯಲ್ಲಿ ಎಫ್ ಪಿಓಗಳಿಗೆ ಕೃಷಿ ಯಂತ್ರಧಾರೆ ಯೋಜನೆಯಡಿ ಎಷ್ಟು ಸಬ್ಸಿಡಿ ನೀಡಲಾಗಿದೆ; ಎಷ್ಟು ಹಾರ್ವೆಸ್ಟರ್ ಟ್ರ್ಯಾಕ್ಟರ್ ವಿತರಿಸಲಾಗಿದೆ? (ತಾಲ್ಲೂಕುವಾರು ವಿವರ ಒದಗಿಸುವುದು) | ರಾಯಚೂರು ಜಿಲ್ಲೆಯಲ್ಲಿ ಎಫ್‌ಪಿಓಗಳಿಗೆ ಕೃಷಿ ಯಂತ್ರಧಾರೆ ಯೋಜನೆಯಡಿ ಯಾವುದೇ ಸಬ್ಸಿಡಿ ನೀಡಿರುವುದಿಲ್ಲ ಮತ್ತು ಯಾವುದೇ ಹಾರ್ವೆಸ್ಟರ್ ಮತ್ತು ಟ್ರಾಕ್ಟರ್ ಗಳನ್ನು ನೀಡಿರುವುದಿಲ್ಲ. ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು 50.00 ಲಕ್ಷಗಳವರೆಗೆ ಸಹಾಯಧನವನ್ನು 'Credit Linked Back Ended Subsidy" ಮುಖಾಂತರ ನೀಡಲಾಗುತ್ತಿದೆ. ರಾಯಚೂರು ಜಿಲ್ಲೆಯಲ್ಲಿ 6 ಎಫ್‌ಪಿಓಗಳಿಗೆ ಕಂಬೈನ್ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಸಹಾಯಧನ ನೀಡಲಾಗಿರುತ್ತದೆ. ವರ್ಷವಾರು ಮತ್ತು ತಾಲ್ಲೂಕುವಾರು ವಿತರಿಸಲಾದ ಹಾರ್ವೆಸ್ಟರ್ ಹಬ್ ವಿವರ ಕೆಳಕಂಡಂತಿದೆ. |

| ವರ್ಷ | ತಾಲ್ಲೂಕು | ಹಬ್ ಗಳ ಸಂಖ್ಯೆ |
|---|---|---|
| 2023-24 | ಮಸ್ಕಿ | 2 |
| | ಸಿಂಧನೂರು | 2 |
| 2024-25 | ಲಿಂಗಸಗೂರು | 1 |
| | ಸಿಂಧನೂರು | 1 |

*ಕೃಇ 46 ಎಎಂಎಸ್ 2025*

(ಎನ್.ಚಲುವರಾಯಸ್ವಾಮಿ)
ಕೃಷಿ ಸಚಿವರು